**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ.214/2024**

ಪಿರ್ಯಾದುದಾರರು ಃ ಅಬಕಾರಿ ಉಪನಿರೀಕ್ಷಕರು

-ವಿರುದ್ದ-

ಆರೋಪಿ/ತರು ಃ ಎ ಓ ಲವ

**-ಃದೋಷಾರೋಪಣೆಃ-**

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಎ ಓ ಲವ ಬಿನ್ ಓಂಕಾರಪ್ಪ, ವಾಸಃಅಸಂದಿ, ಶಿವನಿ ಹೋಬಳಿ, ತರೀಕೆರೆ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ11.04.2023 ರಂದು ಸಂಜೆ 5-00 ರ ಸಮಯದಲ್ಲಿ ಆರೋಪಿಯಾದ ನೀವು ದ್ವಿಚಕ್ರ ವಾಹನದಲ್ಲಿ (KA-66/K-6964, ಚಾರ್ಸಿ ನಂ.ME4JC859KMG017743 Engine No.JC85E-G-1052353) ತರೀಕೆರೆ ಅಜ್ಜಂಪುರ ಬಿ ಹೆಚ್ ರಸ್ತೆಯ ಹುಣಸೇಘಟ್ಟ ಗ್ರಾಮಕ್ಕೆ ಹೋಗುವ ಕ್ರಾಸ್ ನಲ್ಲಿ ಬರುತ್ತಿರುವಾಗ ಅಕ್ರಮವಾಗಿ ಯಾವುದೇ ಪರವಾನಗಿ ಇಲ್ಲದೇ ಒಂದು ಬಿಳಿ ಪ್ಲಾಸ್ಟಿಕ್ ಚೀಲದಲ್ಲಿ 90 ಮಿಲಿಯ ನಂದಿ1 ಹೈವೇ ಡಿಲಕ್ಸ್ ವಿಸ್ಕಿಯ 144 ಟೆಟ್ರಾಪ್ಯಾಕ್ ಗಳನ್ನು ಹೊಂದಿ, ಆ ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ**.32** ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಯಾವುದೇ ಪರವಾನಿಗೆ ಇಲ್ಲದೆ ಸದರಿ ಮದ್ಯವನ್ನು ಸದರಿ ದ್ವಿಚಕ್ರ ವಾಹನದಲ್ಲಿ ದಾಸ್ತಾನು ಹೊಂದಿದ್ದು, ಆ ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ**.38(**ಎ**)** ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಯಾವುದೇ ಪರವಾನಿಗೆ ಇಲ್ಲದೆ ಸದರಿ ಮದ್ಯವನ್ನು ಸದರಿ ದ್ವಿಚಕ್ರ ವಾಹನದಲ್ಲಿ ದಾಸ್ತಾನು ಹೊಂದಿ ಮಾರಾಟ ಮಾಡುವ ಸಲುವಾಗಿ ಸಾಗಾಣಿಕೆ ಮಾಡುತ್ತಿದ್ದು, ಆ ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.**43**(ಎ) ರ ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ28.07.2025

Sd/-
(ವೈದ್ಯ ಶ್ರೀಕಾಂತ್)
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?
ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ28.07.2025

*Sd/-*
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿ/ತರ ಸಹಿಃ